**ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ಇಂಡಿ.**

**ದಿನಾಂಕ 10-06-2026** **ಪಿ. ಸಿ ನಂ.12/2026**

**ಪಿ. ಡಬ್ಲ್ಯೂ - 1**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

ಸ್ವಖುಷಿ ಹೇಳಿಕೆಃ

ಈ ದಿನ ನನ್ನ ಸ್ವ ಖುಷಿ ಹೇಳಿಕೆಯನ್ನು ಪ್ರಮಾಣ ಪತ್ರದ ಮುಖಾಂತರ ಸಲ್ಲಿಸುತ್ತಿದ್ದು ಅದರಲ್ಲಿ ಬರೆದಿರುವ ಎಲ್ಲ ಅಂಶಗಳು ಸತ್ಯದಿಂದ ಕೂಡಿದ್ದು ಸದರಿ ಪ್ರಮಾಣ ಪತ್ರವನ್ನು ನಾನು ಹೇಳಿದಂತೆ ನಮ್ಮ ವಕೀಲರು ತಯಾರಿಸಿರುತ್ತಾರೆ. ನಾನು ಪ್ರಮಾಣ ಪತ್ರದಲ್ಲಿ ಇರುವ ಅಂಶಗಳನ್ನು ಓದಿ ತಿಳಿದುಕೊಂಡ ನಂತರ ನನ್ನ ಸಹಿ ಮಾಡಿರುತ್ತೇನೆ. ಕಾರಣ ಸದರಿ ಪ್ರಮಾಣ ಪತ್ರವನ್ನು ಪರಿಗಣಿಸಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ. ನಾನು ಈ ಕೆಳಕಂಡ ದಾಖಲೆಗಳನ್ನು ಹಾಜರು ಮಾಡಿದ್ದೇನೆ.

ಆರೋಪಿಯು ನನಗೆ ನೀಡಿದ ಚೆಕ್ ನಂ.201923 ನೇದ್ದನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-1 ಎಂದು, ಆರೋಪಿಯ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-1(ಎ) ಎಂದು, ಬ್ಯಾಂಕಿನ ಹಿಂಬರಹವನ್ನು ಹಾಜರುಮಾಡಿದ್ದು ಅದನ್ನು ನಿಪಿ-2 ಎಂದು, ಚೆಕ್ ನಂ.201922 ನೇದ್ದನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು, ಆರೋಪಿಯ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-3(ಎ) ಎಂದು, ಹಿಂಬರಹವನ್ನು ಹಾಜರುಮಾಡಿದ್ದು ಅದನ್ನು ನಿಪಿ-4 ಎಂದು, ನೋಟಿಸನ್ನು ಹಾಜರುಮಾಡಿದ್ದು ಅದನ್ನು ನಿಪಿ-5 ಎಂದು, ಅಂಚೇ ರಶೀದಿಯನ್ನು ಹಾಜರುಮಾಡಿದ್ದು ಅದನ್ನು ನಿಪಿ-6 ಎಂದು, ನೋಟಿಸನ್ನು ಹಾಜರುಮಾಡಿದ್ದು ಅದನ್ನು ನಿಪಿ-7 ಎಂದು, ಅಂಚೇ ಪತ್ರದ ಲಕೋಟೆಯನ್ನು ಹಾಜರುಮಾಡಿದ್ದು ಅದನ್ನು ನಿಪಿ-7(ಎ) ಎಂದು ಗುರುತಿಸಲಾಯಿತು.

**(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯ ಮೇರೆಗೆ ಬೆರಳಚ್ಚು ಮಾಡಲಾಯಿತು)**

**ಓ. ಹೇ. ಕೇ. ಸರಿ ಇದೆ.**

ಸಹಿ/-

**ಪ್ರ ದ ನ್ಯಾ ದಂ ನ್ಯಾ** ಇಂಡಿ